# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಹಾಗೂ ಬಿ.ಬಿ.ಎಂ.ಪಿ. ಯ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಕಾರ್ಯ ನಿರ್ವಹಣಾ ಅವಧಿಯನ್ನು ಮುಂದುವರೆಸುವ ಬಗ್ಗೆ.

## ಓದಲಾಗಿದೆ:

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 28 ಇಕಾಅ 2012, ದಿನಾಂಕ:28/03/2012.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012, ದಿನಾಂಕ: 29/11/2012.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 36 ನಾಸೇಖಾ 2013, ದಿನಾಂಕ: 25/03/2013.
4. ಸರ್ಕಾರದ ಟಿಪ್ಪಣಿ ಸಂಖ್ಯೆ: ಸಿಆಸುಇ 171 ನಾಸೇಖಾ 2012, ದಿನಾಂಕ: 26/03/2013.
5. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: **FD 186 EXP.12/2013** ದಿನಾಂಕ: 28/03/2013.

## ಪ್ರಸ್ತಾವನೆ :

ಮೇಲೆ ಓದಲಾದ (1) ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು 11 ಇಲಾಖೆಗಳ ಮುಖಾಂತರ 151 ಕಾಲಮಿತಿ ಸೇವೆಗಳನ್ನು ಕರ್ನಾಟಕ ನಾಗರೀಕರಿಗೆ ಒದಗಿಸಲು ಕರ್ನಾಟಕ ನಾಗರೀಕರಿಗೆ ಸೇವೆಗಳ ಖಾತರಿ ಅಧಿನಿಯಮ 2011 ಅನ್ನು ದಿನಾಂಕ:02/04/2012 ರಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ.

ಮೇಲೆ ಓದಲಾದ (2) ರ ಅಧಿಸೂಚನೆಯಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ರ ಸಂಬಂಧ ಸರ್ಕಾರದ ಕ್ರಮಾಂಕ: ಸಿಆಸುಇ 119 ನಾಸೇಖಾ 2012, ದಿನಾಂಕ: 26/10/2012 ರ ಅಧಿಸೂಚನೆ-1 ರ ತಿದ್ದುಪಡಿ ಅಧಿಸೂಚನೆಯಲ್ಲಿ ಸೇರಿಸಿರುವ ಹೆಚ್ಚುವರಿ ಸೇವೆಗಳಲ್ಲಿ 12 ಇಲಾಖೆಗಳ 93 ಹೆಚ್ಚುವರಿ ಸೇವೆಗಳನ್ನು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ 21 ಸೇವೆಗಳನ್ನು ದಿನಾಂಕ: 3ನೇ ಡಿಸೆಂಬರ್ 2012 ರಿಂದ ರಾಜ್ಯದಾದ್ಯಂತ ಜಾರಿಗೆ ಬರುವಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011"ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಮಿಷನ್ ಮೋಡ್‌ನಲ್ಲಿ ರಚಿಸಿರುವ ಸಕಾಲ ಮಂಡಳಿಯ ಕಾರ್ಯನಿರ್ವಹಣೆಯ ಅವಧಿಯನ್ನು ಹುದ್ದೆಗಳ ಸಹಿತ ದಿನಾಂಕ: 06.03.2013ರಿಂದ ಒಂದು ವರ್ಷದ ಅವಧಿಗೆ ಮುಂದುವರೆಸಲಾಗಿದೆ.

ಮೇಲೆ ಓದಲಾದ (4)ರ ಸರ್ಕಾರದ ಟಿಪ್ಪಣಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಹಾಯಕವಾಗುವಂತೆ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಪ್ರಸ್ತುತ 30 ಇಲಾಖೆಗಳ 265 ಸೇವೆಗಳನ್ನು ನಿರ್ವಹಿಸಬೇಕಾಗಿದ್ದು, 30 ಜಿಲ್ಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ವೇತನವನ್ನು ರೂ.20,000/- (ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ ಹೆಚ್ಚಿಸಲು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಿದೆ.

ಮೇಲೆ ಓದಲಾದ (5) ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಸಹಮತಿಸಿದೆ. ಆದುದರಿಂದ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 171 ನಾಸೇಖಾ 2012,</u>

<u>ಬೆಂಗಳೂರು ದಿನಾಂಕ: 02/04/2013.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011"ರ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿಗಳಿಗೆ ಜಿಲ್ಲಾ ಮಟ್ಟದಲ್ಲಿ ಅನುವಾಗುವಂತೆ. ಪ್ರಸ್ತುತ ಜಿಲ್ಲಾ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ 30 ಜಿಲ್ಲೆಗಳ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಹಾಗೂ ಬಿ.ಬಿ.ಎಂ.ಪಿ. ಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಸೇವೆಯನ್ನು ಕೆ.ಟಿ.ಪಿ.ಪಿ ಆಕ್ಟ್‌ನ ಸೆಕ್ಷನ್ 4(ಜಿ)ರ ಪ್ರಕಾರ ಕಿಯೋನಿಕ್ಸ್ ಸಂಸ್ಥೆಯ ಮೂಲಕ ಸೇವೆಗಳನ್ನು ಪಡೆದಲ್ಲಿ, ವಿನಾಯಿತಿ ಇರುವುದರಿಂದ, ದಿನಾಂಕ:01/04/2013 ರಿಂದ ಜಾರಿಗೆ ಬರುವಂತೆ ಕಿಯೋನಿಕ್ಸ್ ಸಂಸ್ಥೆಯಡಿ ತಂದು, ಇವರ ಸೇವೆಯನ್ನು ಒಂದು ವರ್ಷದ ಅವಧಿಗೆ ಮುಂದುವರೆಸಿ, ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರವು ಮಂಜೂರಾತಿ ನೀಡಿದೆ. .

- ❖ ಕಿಯೋನಿಕ್ಸ್ ವತಿಯಿಂದ ಶೇ.5ರಷ್ಟು ಸೇವಾ ತೆರಿಗೆ + ಸೇವಾ ಶುಲ್ಕವನ್ನು ಹೊರತುಪಡಿಸಿ ಪ್ರತಿ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಪ್ರತಿ ಮಾಹೆಗೆ ರೂ.20,000/-ಗಳಂತೆ ಸಂಭಾವನೆಯನ್ನು ಸಕಾಲ ಮಂಡಳಿಯಿಂದ ಜಿಲ್ಲಾಧಿಕಾರಿಗಳ ಹಾಗೂ ಬಿಬಿಎಂಪಿ ಆಯುಕ್ತರವರ ಮೂಲಕ ಕಿಯೋನಿಕ್ಸ್ ಸಂಸ್ಥೆಗೆ ಹಣ ಪಾವತಿಸಲಾಗುವುದು.

- ❖ ಪ್ರತಿ ತಿಂಗಳ 5ನೇ ತಾರೀಖಿನೊಳಗೆ ಸಂಬಂಧಪಟ್ಟ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರುಗಳ ಸಂಭಾವನೆಯನ್ನು ಸಕಾಲ ಮಂಡಳಿ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಒದಗಿಸಲಾಗಿರುವ ಅನುದಾನದಿಂದ ಪಡೆದು, ತಪ್ಪದೇ ಕಿಯೋನಿಕ್ಸ್ ಸಂಸ್ಥೆಯು ಪಾವತಿಸತಕ್ಕದ್ದು.

- ❖ ಜಿಲ್ಲಾಧಿಕಾರಿಗಳು/ಆಯುಕ್ತರು, ಬಿಬಿಎಂಪಿ ಇವರು ಯಾವುದೇ ಕಾರಣಕ್ಕೂ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ನೇರವಾಗಿ ಸಂಭಾವನೆಯನ್ನು ಪಾವತಿಸದೆ ಕಿಯೋನಿಕ್ಸ್ ಸಂಸ್ಥೆಯ ಮೂಲಕವೇ ಪಾವತಿಸತಕ್ಕದ್ದು.

- ❖ ಯಾವುದೇ ಒಬ್ಬ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಬದಲಾವಣೆಯಾದರೆ, ಅವರ ಬದಲೀ ವ್ಯವಸ್ಥೆಯನ್ನು ಸಹ ಕಿಯೋನಿಕ್ಸ್ ಸಂಸ್ಥೆಯೇ ಮಾಡಬೇಕಾಗುತ್ತದೆ.

- ❖ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರಿಗೆ ಸಂಭಾವನೆ ಪಾವತಿಸುವಲ್ಲಿ ವಿಳಂಬವಾದಲ್ಲಿ, ಪ್ರತಿ ದಿನದ ವಿಳಂಬಕ್ಕೆ ರೂ.20,000/-ಗಳಿಗೆ ಶೇಕಡ 5 ರಷ್ಟು ದಂಡವನ್ನು ಪಾವತಿಸಬೇಕಾಗುತ್ತದೆ.

ಈ ಮೇಲಿನ ವೆಚ್ಚವನ್ನು 2013-14ನೇ ಸಾಲಿಗೆ ಲೆಕ್ಕಶೀರ್ಷಿಕೆ "2052-00-090-0-26-051" (ಯೋಜನೇತರ) "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಅನುಷ್ಠಾನದಡಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1049 ವೆಚ್ಚ-12/2013, ದಿನಾಂಕ: 21/03/2013 ರ ಸಹಮತಿಯ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ: 27.04.2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಎ. ಗಾಯತ್ರಿ) 2/4/13
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

<u>ಇವರಿಗೆ</u>

1. ಮಹಾಲೇಖಪಾಲರು, (ಲೆಕ್ಕಪತ್ರ)/ (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು/ ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು..
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
10. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳಿ, ಸಿಆಸುಇ(ಆಸು) ವಿಶ್ವೇಶ್ವರಯ್ಯ ದೊಡ್ಡ ಗೋಪುರ, 20ನೇ ಮಹಡಿ, ಬೆಂಗಳೂರು.
11. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ(ಆಸು), ಬೆಂಗಳೂರು.
12. ವ್ಯವಸ್ಥಾಪಕ ನಿರ್ದೇಶಕರು, ಕಿಯೋನಿಕ್ಸ್ ಸಂಸ್ಥೆ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
14. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.